ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಚಾಮರಾಜನಗರ ಒಳಚರಂಡಿ ವ್ಯವಸ್ಥೆ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-

1101 (1268) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರದಲ್ಲಿ ಒಳಚರಂಡಿ ವ್ಯವಸ್ಥೆಯ ಕಾಮಗಾರಿಗಳು ಪೂರ್ಣಗೊಂಡಿವೆಯೇ ; ಕಾಮಗಾರಿಗಳು ಪೂರ್ಣಗೊಳ್ಳದೇ ಇದ್ದಲ್ಲಿ, ಯಾವ ಯಾವ ಕಾಮಗಾರಿಗಳು ಬಾಕಿ ಇವೆ ; ಇದಕ್ಕೆ ತಗುಲಿದ ಒಟ್ಟು ಅಂದಾಜು ವೆಚ್ಚ ಎಷ್ಟು ;

(ಆ) ಒಳಚರಂಡಿ ಕಾಮಗಾರಿ ಮುಗಿದಿದ್ದರೂ, ಮನೆಮನೆಗೆ ಸಂಪರ್ಕ ಕಲ್ಪಿಸದಿರಲು ಕಾರಣಗಳೇನು ; ಒಳಚರಂಡಿ ಕಾಮಗಾರಿಯಲ್ಲಿ ಲೋಪದೋಷಗಳೇನಾದರೂ ಇದೆಯೇ ;

(ಇ) ಪ್ರಸ್ತುತ ತೆರೆದ ಚರಂಡಿಗಳಲ್ಲೇ ಕೊಳಚೆ ನೀರು ಹರಿಯುತ್ತಿದ್ದು, ಬೇಸಿಗೆಯಲ್ಲಿ ಖಾಯಿಲೆಗಳು ಹರಡುವ ಸಂಭವ ಇರುವುದರಿಂದ ಕೂಡಲೇ ಮನೆ ಮನೆಗಳಿಗೆ ಒಳಚರಂಡಿ ಸಂಪರ್ಕ ಕಲ್ಪಿಸಲು ಸೂಕ್ತ ಕ್ರಮ ಜರುಗಿಸಲಾಗುವುದೇ ?